# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 562 |
| ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 14.08.2025. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಶಾಲಾ ಶಿಕ್ಷಣ ಇಲಾಖೆಯಲ್ಲಿ 1967 ರಿಂದ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಣೆ ಮಾಡುವ ಪ್ರಕ್ರಿಯೆ 2018 ರಿಂದ ಜಾರಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಪ್ರಕ್ರಿಯೆ ಪ್ರಾರಂಭವಾಗಿ ಸುಮಾರು 6 ವರ್ಷಗಳು ಕಳೆದಾಗ್ಯೂ ಸಹ ಪೂರ್ಣಗೊಳಿಸದೇ ಇರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ; ಇದನ್ನು ಅಂತಿಮಗೊಳಿಸಲು ಇನ್ನೆಷ್ಟು ವರ್ಷಗಳು ಬೇಕಾಗಬಹುದು; (ಮಾಹಿತಿ ನೀಡುವುದು) | ಬಂದಿದೆ.<br><br>ಶಾಲಾ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಣೆ ಮಾಡಲು ಗಂಭೀರವಾಗಿ ಪರಿಗಣಿಸಿದ್ದು, ವೃಂದ ನಿರ್ವಹಣಾ ಉಪಸಮಿತಿಯು ವೃಂದ ನಿಯಮಗಳ ಸಮಗ್ರ ಪರಿಷ್ಕರಣಾ ಕರಡನ್ನು ಅಂತಿಮಗೊಳಿಸಿದೆ.<br><br>ಶಾಲಾ ಶಿಕ್ಷಣ ಇಲಾಖೆಯಲ್ಲಿ 73 ವಿವಿಧ ವರ್ಗದ ವೃಂದಗಳಿದ್ದು, ಇವುಗಳಲ್ಲಿ ಒಟ್ಟು 2,57,895 ಮಂಜೂರಾದ ಹುದ್ದೆಗಳಿರುವುದರಿಂದ ಪರಿಷ್ಕರಣೆ ಕಾರ್ಯ ಕೈಗೊಳ್ಳಲು ಕಾಲಾವಕಾಶದ ಅವಶ್ಯವಿರುತ್ತದೆ.<br><br>ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸುವ ಕುರಿತು ಪೂರಕವಾಗಿ ಕೆಲವು ವೃಂದಗಳ ಪದನಾಮವನ್ನು ಮರು ಪದನಾಮೀಕರಣಗೊಳಿಸಲು ಮತ್ತು SADPI (Commerce) ಮತ್ತು ADPI (Commerce) ವೃಂದಗಳನ್ನು ರದ್ದುಪಡಿಸಲು ಹಾಗೂ ಹಿರಿಯ ಬೆರಳಚ್ಚುಗಾರರ ವೃಂದವನ್ನು ಪ್ರಥಮ ದರ್ಜೆ ಸಹಾಯಕರ ವೃಂದದಲ್ಲಿ ವಿಲೀನಗೊಳಿಸುವ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಿ ಕಡತ ಸಂಖ್ಯೆ: ಇಪಿ 23 ಡಿಪಿಐ 2020 (ಭಾಗ-4) (1004720)ನ್ನು ದಿನಾಂಕ: 11.02.2023 ರಂದು ಆರ್ಥಿಕ ಇಲಾಖೆಗೆ ಕಳುಹಿಸಲಾಗಿದ್ದು, ಆರ್ಥಿಕ ಇಲಾಖೆಯಿಂದ ಅಭಿಪ್ರಾಯ ಬರುವುದು ಬಾಕಿ ಇರುತ್ತದೆ.<br><br>ಪ್ರಸ್ತುತ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು), ಆರ್ಥಿಕ ಇಲಾಖೆ ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಗಳ ಅಭಿಪ್ರಾಯಗಳನ್ವಯ ಕರಡು ನಿಯಮಗಳನ್ನು ಸಿದ್ಧಪಡಿಸಿ, ಅದನ್ನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯಿಂದ ಪರಿಶೋಧಿಸಿಕೊಂಡು ಸರ್ಕಾರದ ಅಪರ ಮುಖ್ಯ |

| | | |
|---|---|---|
| | | ಕಾರ್ಯದರ್ಶಿಯವರ ಅಧ್ಯಕ್ಷತೆಯ ವೃಂದ ಪರಿಶೀಲನಾ ಸಮಿತಿಯ ಮುಂದೆ ಮಂಡಿಸಿ ಅನುಮೋದನೆ ಪಡೆದು, ಸಚಿವ ಸಂಪುಟದ ಮುಂದೆ ಮಂಡಿಸಲು ತ್ವರಿತವಾಗಿ ಕ್ರಮ ಕೈಗೊಳ್ಳಲಾಗುವುದು. |
| ಆ) | 2004 ರಿಂದ ಇಲ್ಲಿಯವರೆಗಿನ ಸಿ.ಆ.ಸು. ಇಲಾಖೆಯ ನಡವಳಿಗಳ ಮತ್ತು ಸುತ್ತೋಲೆಗಳ ಸತತ ನೆನಪೋಲೆಗಳ ತರುವಾಯವು ಪರಿಷ್ಕರಿಸುವ ಬಗ್ಗೆ ತಿಳಿಸಿದ್ದರೂ ಸಹ ಶಾಲಾ ಶಿಕ್ಷಣ ಇಲಾಖೆಯು ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆಯ ಬಗ್ಗೆ ವಿಳಂಬ ಮಾಡುತ್ತಿರುವ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಕೈಗೊಂಡಿರುವ ಕ್ರಮಗಳೇನು; | ಸರ್ಕಾರದ ಎಲ್ಲಾ ಇಲಾಖೆಗಳು ತಮ್ಮ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಕನಿಷ್ಠ ಮೂರು ವರ್ಷಗಳಿಗೊಮ್ಮೆ ಪರಿಷ್ಕರಿಸುವಂತೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 97 ಸೇನಿಡಿ 2004, ದಿನಾಂಕ: 08.10.2004 ರಲ್ಲಿ ತಿಳಿಸಲಾಗಿದೆ.<br><br>ರಾಜ್ಯ ಸರ್ಕಾರದ ಎಲ್ಲಾ ಇಲಾಖೆ / ಅಧೀನ ಇಲಾಖೆಗಳಲ್ಲಿ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳ ರಚನೆ / ಪರಿಷ್ಕರಣೆಗೆ ಸಂಬಂಧಿಸಿದಂತೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಕಾಲಕಾಲಕ್ಕೆ ಎಲ್ಲಾ ಇಲಾಖೆಗಳಿಗೆ ಸರ್ಕಾರದ ಆದೇಶ / ಸುತ್ತೋಲೆಗಳ ಮೂಲಕ ಮಾರ್ಗಸೂಚಿಗಳನ್ನು ನೀಡಲಾಗಿದೆ.<br><br>ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಂತದಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಪರಿಶೀಲನೆ ಸಭೆಯನ್ನು ಕೈಗೊಳ್ಳಲಾಗಿದೆ.<br><br>ಸರ್ಕಾರದ ವಿವಿಧ ಇಲಾಖೆಗಳ ಹಳೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ತಿದ್ದುಪಡಿ ಮಾಡುವ ಕಾರ್ಯವು ಪ್ರಗತಿಯಲ್ಲಿರುತ್ತದೆ. |
| ಇ) | ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆಗೆ ಸಂಬಂಧಿಸಿದಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಸಮಿತಿಗಳನ್ನು ರಚಿಸಿ ಅಂತಿಮಗೊಳಿಸುವ ಬಗ್ಗೆ ಆದೇಶಗಳಿದ್ದಾಗ್ಯೂ 2018 ರಿಂದ ಇಲ್ಲಿಯವರೆಗೆ ಶಿಕ್ಷಣ ಇಲಾಖೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸಲು ಶಾಲಾ ಶಿಕ್ಷಣ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಹಾಗೂ ಇನ್ನಿತರ ಇಲಾಖೆಗಳ ಅಧಿಕಾರಿಗಳಿಗೆ ಇಚ್ಛಾಶಕ್ತಿ ಇಲ್ಲವೇ; ಹಾಗಿದ್ದಲ್ಲಿ ಸುಮಾರು 6 ವರ್ಷಗಳು ಕಳೆದಾಗ್ಯೂ ಸಹ ಇಲಾಖೆಗಳೊಂದಿಗೆ ಸಮನ್ವಯತೆ ಸಾಧಿಸಿ ಪರಿಷ್ಕರಣೆ ಮಾಡಲು ಸರ್ಕಾರ ಎಷ್ಟು ದಿನಗಳಲ್ಲಿ ಕ್ರಮ ಕೈಗೊಳ್ಳುವುದು; ಪರಿಷ್ಕರಣೆ ಕುರಿತು ಸರ್ಕಾರ ಭರವಸೆ | ಮೇಲಿನ ಉಪ ಪ್ರಶ್ನೆ (ಅ)ಗೆ ನೀಡಿರುವ ಉತ್ತರದಂತೆ ಶಾಲಾ ಶಿಕ್ಷಣ ಇಲಾಖೆಯಲ್ಲಿ ಬಹಳಷ್ಟು ವೃಂದಗಳಿದ್ದು, ಪ್ರತಿಯೊಂದು ವೃಂದದ ಹುದ್ದೆಗಳ ಬಗ್ಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಆರ್ಥಿಕ ಇಲಾಖೆ ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಗಳ ಅಭಿಪ್ರಾಯ ಪಡೆಯಲಾಗಿದೆ. ಈಗಾಗಲೇ ವೃಂದ ಪರಿಷ್ಕರಣಾ ಉಪ ಸಮಿತಿ ಕರಡು ತಿದ್ದುಪಡಿ ನಿಯಮಗಳನ್ನು ಅನುಮೋದಿಸಿರುತ್ತದೆ.<br><br>ಮೇಲೆ ತಿಳಿಸಿದ ಇಲಾಖೆಗಳ ಪೈಕಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯ ಅಭಿಪ್ರಾಯಗಳು ಸ್ವೀಕೃತವಾಗಿದ್ದು, ಆರ್ಥಿಕ ಇಲಾಖೆಯ ಅಭಿಪ್ರಾಯ ಸ್ವೀಕೃತವಾದ ನಂತರ ಅದನ್ನು ಪರಿಷ್ಕೃತ ಕರಡು ನಿಯಮಗಳಲ್ಲಿ ಅಳವಡಿಸಿಕೊಂಡು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯ ವೃಂದ ಪರಿಶೀಲನಾ ಸಮಿತಿಯ ಮುಂದೆ ಮಂಡಿಸುವ ಪ್ರಕ್ರಿಯೆಯನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು. |

| | | |
|---|---|---|
| | ನೀಡುವುದೇ; ಪರಿಷ್ಕರಣೆ ಸಾಧ್ಯವಾಗದೇ ಇದ್ದಲ್ಲಿ ಕಾರಣಗಳೇನು ಎಂಬುದರ ಬಗ್ಗೆ ಪೂರ್ಣ ಮಾಹಿತಿ ನೀಡುವುದು; | |
| ಈ) | ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆಗೆ ಸಂಬಂಧಿಸಿದಂತೆ ಸರ್ಕಾರದ ಇತರೆ ಇಲಾಖೆಗಳ ಆದೇಶಗಳನ್ನು ಮರೆ ಮಾಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಮರೆ ಮಾಚುತ್ತಿರುವ ಹಾಗೂ ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ; (ವಿವರ ನೀಡುವುದು) | ಇಲ್ಲ<br><br>ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ / ತಿದ್ದುಪಡಿ ಮಾಡುವ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು (ಸೇವಾ ನಿಯಮಗಳು) ನಿರ್ದಿಷ್ಟ ಮಾರ್ಗಸೂಚಿಗಳನ್ನು ನಿಗದಿಪಡಿಸಿ ಸುತ್ತೋಲೆ / ಆದೇಶಗಳನ್ನು ಕಾಲ ಕಾಲಕ್ಕೆ ಹೊರಡಿಸಿರುತ್ತದೆ. ಈ ಮಾರ್ಗಸೂಚಿಗಳನ್ವಯ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಲು ಕ್ರಮವಹಿಸಲಾಗುತ್ತಿದೆ. ಇದರಲ್ಲಿ ಯಾವುದೇ ಆದೇಶ ಮರೆಮಾಚಿರುವುದಿಲ್ಲ. |
| ಉ) | ಶಾಲಾ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಿ ಅಂತಿಮವಾಗಿ ಆದೇಶಿಸುವ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಸರ್ಕಾರದ ಸ್ಪಷ್ಟ ನಿಲುವೇನು? (ಮಾಹಿತಿ ನೀಡುವುದು) | ಶಾಲಾ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕೃತ ಕರಡನ್ನು ಈಗಾಗಲೇ ವೃಂದ ನಿರ್ವಹಣಾ ಉಪಸಮಿತಿಯು ಅನುಮೋದಿಸಿದ್ದು, ಕೆಲವು ವೃಂದಗಳ ಪದನಾಮವನ್ನು ಮರು ಪದನಾಮೀಕರಣಗೊಳಿಸಲು ಮತ್ತು ಕೆಲವು ವೃಂದಗಳನ್ನು ರದ್ದುಪಡಿಸಲು ಹಾಗೂ ಕೆಲವು ವೃಂದಗಳನ್ನು ವಿಲೀನಗೊಳಿಸುವುದಕ್ಕೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯ ಅಭಿಪ್ರಾಯ ಸ್ವೀಕೃತವಾದ ನಂತರ, ಅದನ್ನು ಪರಿಷ್ಕೃತ ಕರಡು ನಿಯಮಗಳಲ್ಲಿ ಅಳವಡಿಸಿಕೊಂಡು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯ ವೃಂದ ಪರಿಶೀಲನಾ ಸಮಿತಿಯ ಅನುಮೋದನೆ ಪಡೆದು, ಸಚಿವ ಸಂಪುಟದ ಮುಂದೆ ಮಂಡಿಸಲು ತ್ವರಿತವಾಗಿ ಕ್ರಮಕೈಗೊಳ್ಳಲಾಗುವುದು. |

ಇಪಿ 152 ಡಿಎಲ್‌ಆರ್ 2025

(ಎಸ್. ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು